ಸರಿಯುವ ಮನುಷ್ಯ ನಾನಲ್ಲ. ಆದರೆ ಅವರಿಗೆ ಸಂಬಂಧಿಸಿದ ಯಾವುದೇ ಕಲಾಪ ಇರಲಿಲ್ಲ. There was no occasion warranting me to take such action. If such a situation had arisen, take it from me, I would never have hesitated. For me the dignity of the House is utmost important and no other consideration is more important than that.

ಶ್ರೀ ಎ. ಟಿ. ರಾಮಸ್ವಾಮಿ : ಕಲಾಪ ಇದ್ದರೆ ಸದನಕ್ಕೆ ಬರಬೇಕು, ಇಲ್ಲದಿದ್ದರೆ ಬರಬಾರದು ಎಂದು ಇದ್ದರೆ ಕಷ್ಟವಾಗುತ್ತದೆ.

ಶ್ರೀ ಸಿ. ಆರ್. ಸಗೀರ್ ಅಹಮದ್ : ಸನ್ಮಾನ್ಯ ಅನಂತನಾಗ್‌ರವರಿಗೆ ಯಾವ ಇಲಾಖೆ ಬಗ್ಗೆ ಪ್ರಶ್ನೆ ಹಾಕಬೇಕು ಎನ್ನುವುದೇ ಒಂದು ದೊಡ್ಡ ಸಮಸ್ಯೆಯಾಗಿದೆ.

ಅಧ್ಯಕ್ಷರು : ಡಿ. ಪಿ. ಎ. ಆರ್. ನಿಂದ ಹೊರಡಿಸಿರತಕ್ಕಂಥ ನೋಟಿಫಿಕೇಷನ್ನಿನ ಕಾಪಿ ತೆಗೆದುಕೊಳ್ಳಿ, ಅವರಿಗೆ ಏನು ಇಲಾಖೆ ಕೊಟ್ಟಿದ್ದಾರೆಂದು ನೋಡಿಕೊಳ್ಳಿ, ಅವರಿಗೆ ಸಂಬಂಧಿಸಿದಂತೆ ಪ್ರಶ್ನೆಗಳನ್ನು ಕಳುಹಿಸಿ. Alright. I am moving on the next item on the agenda.

ಶ್ರೀ ಜಿ. ವಿ. ಶ್ರೀರಾಮರೆಡ್ಡಿ : ನಾನು ಒಂದು ಹಕ್ಕುಚ್ಯುತಿ ನಿರ್ಣಯ ಕೊಟ್ಟಿದ್ದೆ. ದಯವಿಟ್ಟು ಅದನ್ನು ತೆಗೆದುಕೊಳ್ಳಬೇಕು ಎಂದು ನಾನು ಒತ್ತಾಯ ಮಾಡುತ್ತೇನೆ.

ಅಧ್ಯಕ್ಷರು : ರೆಡ್ಡಿಯವರೆ, ಮೊದಲು ಫಾರ್ಮಲ್ ಬಿಸಿನೆಸ್ ಮುಗಿಸಿಬಿಡೋಣ.

2. ಸಭೆಯ ಮುಂದಿಡಲಾದ ಕಾಗದ ಪತ್ರಗಳು

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕಾ ಸಚಿವರು) (ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, ಭಾರತದ ನಿಯಂತ್ರಕರು ಹಾಗೂ ಮಹಾಲೇಖಪಾಲಕರವರು ನೀಡಿರುವ ಕರ್ನಾಟಕ ಸರ್ಕಾರದ 1998ನೇ ಸಾಲಿನ ಮಾರ್ಚ್ 31ರ ಅಂತ್ಯದವರೆಗೆ (ವಾಣಿಜ್ಯಕ್ಕೆ) ಸಂಬಂಧಿಸಿದ ಲೆಕ್ಕ ಪರಿಶೋಧನಾ ವರದಿಯನ್ನು ಸಭೆಯ ಮುಂದಿಡುತ್ತಿದ್ದೇನೆ.

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕಾ ಸಚಿವರು) (ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, 1984ರ ಕರ್ನಾಟಕ ಲೋಕಾಯುಕ್ತ ಅಧಿನಿಯಮ 12(7)ನೇ ಪ್ರಕರಣದ ಮೇರೆಗೆ.

(1) 1997-98ನೇ ಸಾಲಿನ ಕರ್ನಾಟಕ ಲೋಕಾಯುಕ್ತ ಮತ್ತು ಉಪಲೋಕಾಯುಕ್ತರವರ 12ನೇ ಕ್ರೋಢೀಕೃತ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಸಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕಾ ಸಚಿವರು) (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಪಾರ್ವಾ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, 1993ರ ಕರ್ನಾಟಕ ಪಂಚಾಯತ್‌ರಾಜ್ ಅಧಿನಿಯಮ 300(5)ನೇ ಪ್ರಕರಣದ ಮೇರೆಗೆ, 1997-98ನೇ ಸಾಲಿನ ಗುಲ್ಬರ್ಗಾ ಜಿಲ್ಲಾ ಪಂಚಾಯತ್‌ನ ವಾರ್ಷಿಕ ಆಡಳಿತ ವರದಿ ಮತ್ತು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಪಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) : ಮಾನ್ಯ ಅಧ್ಯಕ್ಷರೇ, 1956ರ ಕಂಪನಿಗಳ ಕಾಯ್ದೆಯ 619(ಎ) ಪ್ರಕರಣದ ಮೇರೆಗೆ; 1997-98ನೇ ಸಾಲಿನ ಮೈಸೂರು ಟೊಬ್ಯಾಕೋ ಕಂಪನಿಯ ವಾರ್ಷಿಕ ಹಾಗೂ ಲೆಕ್ಕ ಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಪಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು)(ಗೃಹ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ, 1956ರ ಕಂಪನಿ ಕಾಯ್ದೆ 619(ಎ)ರ ಮೇರೆಗೆ 1997-98ನೇ ಸಾಲಿನ ಕರ್ನಾಟಕ ಪೋಲೀಸ್ ಗೃಹ ನಿರ್ಮಾಣ ನಿಗಮ ನಿಯಮಿತದ ವಾರ್ಷಿಕ ಹಾಗೂ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಪಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) (ಅರಣ್ಯ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ, 1956ರ ಕಂಪನಿಗಳ ಕಾಯ್ದೆಯ 619ಎ ಪ್ರಕರಣದ ಮೇರೆಗೆ ; 1996-97ನೇ ಸಾಲಿನ ದಿ ಕರ್ನಾಟಕ ರಾಜ್ಯ ವೀನಿರ್ಸ್ ನಿಯಮಿತದ ವಾರ್ಷಿಕ ಆಡಳಿತ ಹಾಗೂ ಲೆಕ್ಕ ಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಪಿ. ಬೈರೇಗೌಡ (ಕೃಷಿ ಮತ್ತು ತೋಟಗಾರಿಕೆ ಸಚಿವರು) (ಭಾರೀ ಮತ್ತು ಮಧ್ಯಮ ಕೈಗಾರಿಕಾ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೇ, 1956ರ ಕಂಪನಿಗಳ ಕಾಯ್ದೆಯ 619 ಎ ಪ್ರಕರಣದ ಮೇರೆಗೆ ; 1997-98ನೇ ಸಾಲಿನ ದಿ ಮೈಸೂರು ಅಸಿಟೇಟ್ ಮತ್ತು ಕೆಮಿಕಲ್ಸ್ ನಿಯಮಿತದ 34ನೇ ವಾರ್ಷಿಕ ಹಾಗೂ ಲೆಕ್ಕ ಪರಿಶೋಧನಾ ವರದಿ ಮತ್ತು 1997-98ನೇ ಸಾಲಿನ ಕರ್ನಾಟಕ ರಾಜ್ಯ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ವಾರ್ಷಿಕ ವರದಿಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಎ. ಬಿ. ಪಾಟೀಲ್ (ಗಣಿ ಮತ್ತು ಭೂವಿಜ್ಞಾನ ಪರಿಸರ, ಜೀವಿಶಾಸ್ತ್ರ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು) : ಮಾನ್ಯ ಅಧ್ಯಕ್ಷರೇ, 1970 ಜಲ ಮಾಲಿನ್ಯ ನಿವಾರಣೆ ಹಾಗೂ ನಿಯಂತ್ರಣ ಕಾಯ್ದೆ ಕಂಡಿಕೆ 39(2)ರ ಅನ್ವಯ 1997-98ನೇ ಸಾಲಿನ ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ವಾರ್ಷಿಕ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) : ಮಾನ್ಯ ಅಧ್ಯಕ್ಷರೇ, 1956ರ ಕಂಪನಿಗಳ ಕಾಯ್ದೆಯ 619ಎ ಪ್ರಕರಣದ ಮೇರೆಗೆ ; 1994-95ನೇ ಸಾಲಿನ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ನಿಗಮದ 10ನೇ ವಾರ್ಷಿಕ ವರದಿ, ಹಾಗೂ ಲೆಕ್ಕಪರಿಶೋಧನಾ ವರದಿ ಮತ್ತು 1995-96ನೇ ಸಾಲಿನ ಕರ್ನಾಟಕ ಒಳನಾಡು ಮೀನುಗಾರಿಕೆ ಅಭಿವೃದ್ಧಿ ನಿಗಮದ 11ನೇ ವಾರ್ಷಿಕ ವರದಿ ಹಾಗೂ ಲೆಕ್ಕಪತ್ರಗಳ ಪರಿಶೋಧನಾ ವರದಿಗಳನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಶ್ರೀ ಕೆ. ಜಯಪ್ರಕಾಶ್ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) (ಪಶುಸಂಗೋಪನಾ ರಾಜ್ಯ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೇ, 1956ರ ಕಂಪನಿಗಳ ಕಾಯ್ದೆಯ 619ಎ ಪ್ರಕರಣದ ಮೇರೆಗೆ 1997-98ನೇ ಸಾಲಿನ ಕರ್ನಾಟಕ ಮಾಂಸ ಮತ್ತು ಕೋಳಿ ಮಾರಾಟ ನಿಗಮ ನಿಯಮಿತದ 24ನೇ ವಾರ್ಷಿಕ ಹಾಗೂ ಲೆಕ್ಕಪರಿಶೋಧನಾ ವರದಿಯನ್ನು ಸಭೆಯ ಮುಂದೆ ಮಂಡಿಸುತ್ತಿದ್ದೇನೆ.

ಅಧ್ಯಕ್ಷರು : ಎಲ್ಲಾ ಕಾಗದ ಪತ್ರಗಳನ್ನು ಸದನದ ಮುಂದೆ ಮಂಡಿಸಲಾಯಿತು.

3. ಅರ್ಜಿಗಳನ್ನೊಪ್ಪಿಸುವುದು

(ಅ) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮ) : ಮಾನ್ಯ ಅಧ್ಯಕ್ಷರೇ, ಬೆಂಗಳೂರಿನ ರಾಜಾಜಿನಗರದ ಶ್ರೀ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಕಾಲೇಜಿನಲ್ಲಿ ಅರ್ಥಶಾಸ್ತ್ರ ಉಪನ್ಯಾಸಕರಾಗಿ ಸೇವೆ ಸಲ್ಲಿಸಿರುವ ಶ್ರೀ ಎಂ. ಟಿ. ಮಂಜುನಾಥ್ ಇವರಿಗೆ ಆರ್ಥಿಕ ಮತ್ತು ಸೇವಾ ಸೌಲಭ್ಯಗಳನ್ನು ನೀಡುವ ಬಗ್ಗೆ ಅರ್ಜಿಯನ್ನೊಪ್ಪಿಸುತ್ತಿದ್ದೇನೆ.

(ಆ) ಶ್ರೀ ಚಂದ್ರಶೇಖರ ಸದಾಶಿವ ನಾಯಕ್ (ಗೋಕಾಕ್) : ಮಾನ್ಯ ಅಧ್ಯಕ್ಷರೇ, ಭೂ ದಾಖಲೆಗಳ ಇಲಾಖೆಯಲ್ಲಿ ತಪಾಸಕರಾಗಿ ಕಾರ್ಯ ನಿರ್ವಹಿಸುತ್ತಿರುವ ಶ್ರೀ ಎಸ್. ಬುಗಡಿಕಟ್ಟೆ ಇವರಿಗೆ ವೇತನ ನಿಗದಿಪಡಿಸುವ ಬಗ್ಗೆ ಅರ್ಜಿಯನ್ನೊಪ್ಪಿಸುತ್ತಿದ್ದೇನೆ.

(ಇ) ಶ್ರೀ ಪಿ. ಸಿ. ಸಿದ್ದನಗೌಡರ್ (ಕಲಘಟಗಿ) : ಮಾನ್ಯ ಅಧ್ಯಕ್ಷರೆ, ಧಾರವಾಡ ಜಿಲ್ಲೆಯ ಕಲಘಟಗಿ ತಾಲ್ಲೂಕಿನ ತಾವರಗೇರಿ ಗ್ರಾಮದ ಶ್ರೀ ಕಲ್ಲಪ್ಪ ನಾಗಪ್ಪ ಹೊನ್ನಿಹಳ್ಳಿ, ಗ್ರಾಮ ಲೆಕ್ಕಿಗರು, ಇವರ ಹುದ್ದೆಗೆ ನೀಡಿದ ರಾಜೀನಾಮೆಯನ್ನು ಸ್ವಇಚ್ಛಾ ನಿವೃತ್ತಿಯೆಂದು ಪರಿಗಣಿಸುವ ಬಗ್ಗೆ ಅರ್ಜಿಯನ್ನೊಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ಎಲ್ಲಾ ಅರ್ಜಿಗಳನ್ನು ಸದನಕ್ಕೆ ಒಪ್ಪಿಸಲಾಯಿತು.

4. ವರದಿಯನ್ನೊಪ್ಪಿಸುವುದು

ಶ್ರೀ ಚಂದ್ರಶೇಖರ ಸದಾಶಿವ ನಾಯಕ್ (ಗೋಕಾಕ್) : ಮಾನ್ಯ ಅಧ್ಯಕ್ಷರೇ, ಕರ್ನಾಟಕ ವಿಧಾನಸಭೆಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ ಅಧ್ಯಕ್ಷನಾದ ನಾನು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮವು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಜನರ ಕಲ್ಯಾಣಕ್ಕಾಗಿ ಹಮ್ಮಿಕೊಂಡಿರುವ ವಿವಿಧ ಯೋಜನೆಗಳ ಹಾಗೂ ಅವುಗಳ ಅನುಷ್ಠಾನದ ಬಗೆಗಿನ 11ನೇ ವರದಿಯನ್ನು ಸಭೆಗೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು : ವರಿದಯನ್ನೊಪ್ಪಿಸಲಾಯಿತು.

ಅಧ್ಯಕ್ಷರು : ರೆಡ್ಡಿಯವರೆ, ತಾವು ಕೊಟ್ಟಿರತಕ್ಕಂಥ ಪ್ರಿವಿಲೇಜ್ ನೋಟೀಸಿನ ಬಗ್ಗೆ ಪ್ರಾಸ್ತಾವಿಕ ಮನವಿಯನ್ನು ಸಲ್ಲಿಸಬಹುದು.

5. ಹಕ್ಕುಚ್ಯುತಿ ಪ್ರಸ್ತಾಪ

ವಿಷಯ : (ಅ) ಶಾಸಕರಾದ ಶ್ರೀ ಜಿ. ವಿ. ಶ್ರೀರಾಮರೆಡ್ಡಿಯವರು ತಮ್ಮ ಕ್ಷೇತ್ರದ ಕೆಲಸವನ್ನು ನಿರ್ವಹಿಸುವಲ್ಲಿ ಕಂದಾಯ ಮಂತ್ರಿಗಳಾದ ಶ್ರೀ ಸೋಮಶೇಖರ್‌ರವರು ಅಡ್ಡಿಪಡಿಸುತ್ತಿರುವುದು.